ಸಾಕ್ ಹೊರ

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1012 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 29.09.2020 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಕರ್ನಾಟಕದ ಕೆಲವು ಮಾದರಿಯ ಪ್ಲಾಸ್ಟಿಕ್ ಸಾಮಗ್ರಿಗಳ ಉತ್ಪಾದನೆ ಮತ್ತು ಮಾರಾಟವನ್ನು ನಿಷೇಧಿಸಲಾಗಿದೆಯೇ; ಈ ಹಿನ್ನೆಲೆಯಲ್ಲಿ ಪ್ಲಾಸ್ಟಿಕ್ ಹೊರತುಪಡಿಸಿ ಜೈವಿಕವಾಗಿ ಕರಗುವ ಮತ್ತು ಬಳಸಿ ಪ್ಯಾಕಿಂಗ್ ಮಾಡುವ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಿ ತರಬೇತಿ ನೀಡಲು ಪರ್ಯಾಯ ಪ್ಯಾಕಿಂಗ್ ತಂತ್ರಜ್ಞಾನ ಅಭಿವೃದ್ಧಿ ಸಂಸ್ಥೆ ತೆರೆಯಲು ರೂ.5.00 ಕೋಟಿಗಳನ್ನು ಒದಗಿಸಿದ್ದು, ಇದು ಅನುಷ್ಠಾನದಲ್ಲಿದೆಯೇ; ಅನುಷ್ಠಾನಗೊಳಿಸದೇ ಇದ್ದಲ್ಲಿ ಕಾರಣಗಳೇನು; | 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಕರ್ನಾಟಕದ ಕೆಲವು ಮಾದರಿ ಪ್ಲಾಸ್ಟಿಕ್ ಸಾಮಗ್ರಿಗಳ ಉತ್ಪಾದನೆ ಮತ್ತು ಮಾರಾಟವನ್ನು ನಿಷೇಧಿಸಲಾಗಿದೆ.<br><br>ಈ ಹಿನ್ನೆಲೆಯಲ್ಲಿ ಪ್ಲಾಸ್ಟಿಕ್ ಹೊರತುಪಡಿಸಿ ಜೈವಿಕವಾಗಿ ಕರಗುವ ಮತ್ತು ಬಳಸಿ ಪ್ಯಾಕಿಂಗ್ ಮಾಡುವ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಿ ತರಬೇತಿ ನೀಡಲು ಪರ್ಯಾಯ ಪ್ಯಾಕಿಂಗ್ ತಂತ್ರಜ್ಞಾನ ಅಭಿವೃದ್ಧಿ ಸಂಸ್ಥೆ ತೆರೆಯಲು ರೂ.5.00 ಕೋಟಿಗಳನ್ನು ಮೀಸಲಿಡಲಾಗಿತ್ತು. ಅದರಂತೆ ಭಾರತ ಸರ್ಕಾರದ ಸಂಸ್ಥೆಯಾದ "ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಪ್ಯಾಕೇಜಿಂಗ್" ಇವರಿಗೆ ಕರ್ನಾಟಕದಲ್ಲಿ ತಮ್ಮ ಶಾಖೆಯನ್ನು ತೆರೆಯಲು ದಿನಾಂಕ: 16–07–2018 ಮತ್ತು 29–11–2018 ರಂದು ಕೋರಲಾಗಿದೆ.<br><br>ಈ ಸಂಸ್ಥೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ದಾಬಸ್‌ಪೇಟೆ ಕೈಗಾರಿಕಾ ಪ್ರದೇಶದಲ್ಲಿ ದಿ: 31–01–2013 ರಂದು 4 ಎಕರೆ ನಿವೇಶನವನ್ನು ಹಂಚಿಕೆ ಮಾಡಲಾಗಿದೆ. ಆದರೆ ಈ ಸಂಸ್ಥೆಯು ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸಿರುವುದಿಲ್ಲ.<br><br>ಈ ಸಂಸ್ಥೆಯು ಭಾರತ ಸರ್ಕಾರದಿಂದ ಅನುದಾನ ದೊರೆಯದ ಕಾರಣ ರಾಜ್ಯ ಸರ್ಕಾರದಿಂದ ಪ್ರತಿ ವರ್ಷ ರೂ.2.00 ಕೋಟಿಯಂತೆ 3 ವರ್ಷಗಳ ಅಧಿಕಾರಿಗಳ ಮತ್ತು ಸಿಬ್ಬಂದಿಯ ವೇತನ ಮತ್ತು ಭತ್ಯೆಗಳನ್ನು ನೀಡಲು ಬೇಡಿಕೆಯನ್ನು ಸಲ್ಲಿಸಿರುತ್ತದೆ.<br><br>ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಸಿಐ 68 ಸಪ್ರಕೈ 2018 ಬೆಂಗಳೂರು ದಿನಾಂಕ 07–11–2018 ರಲ್ಲಿ ಈ ಬೇಡಿಕೆಗೆ ಒಪ್ಪಿಗೆ ನೀಡದ್ದರಿಂದ ಮತ್ತು "ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಪ್ಯಾಕೇಜಿಂಗ್" ಸಂಸ್ಥೆಗೆ ಭಾರತ ಸರ್ಕಾರದ ಅನುದಾನ ದೊರೆಯದ ಕಾರಣ ತಾತ್ಕಾಲಿಕವಾಗಿ ಈ ಯೋಜನೆಯು ಸ್ಥಗಿತಗೊಂಡಿರುತ್ತದೆ. |

| | | |
|---|---|---|
| ಅ) | ಅನುಷ್ಠಾನಗೊಳಿಸಿದ್ದಲ್ಲಿ ಯಾವ ಸಂಸ್ಥೆಯಿಂದ ಈ ತರಬೇತಿ ಕಾರ್ಯ ನಡೆಯುತ್ತಿದೆ; | ಅನ್ವಯಿಸುವುದಿಲ್ಲ |
| ಇ) | ನಿಯಮಾನುಸಾರ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆಯೇ; (ಈ ಬಗ್ಗೆ ಸಂಪೂರ್ಣ ವರದಿ ನೀಡುವುದು) | ಅನ್ವಯಿಸುವುದಿಲ್ಲ. |

*(ಜಗದೀಶ್ ಶೆಟ್ಟರ್)*
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು